## ಕರ್ನಾಟಕ ಸರ್ಕಾರ

ಸಂಖ್ಯೆ: ಪ.ಪೂ.ಶಿಇ/ಶೈ.ಶಾ/MHRD Sch /2016-III Ren/2019-20

ನಿರ್ದೇಶಕರ ಕಛೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು – 560012
ದಿನಾಂಕ: 04–08–2018

**BOOK POST**

ಗೆ,
ಎಲ್ಲಾ ಪ್ರಾಂಶುಪಾಲರು,
ತಾಂತ್ರಿಕ ಮಹಾವಿದ್ಯಾಲಯ/ವೈದ್ಯಕೀಯ ಮಹಾವಿದ್ಯಾಲಯ/
ದಂತ ಮಹಾವಿದ್ಯಾಲಯ/ಆಯುರ್ವೇದ ಮಹಾವಿದ್ಯಾಲಯ.

ಮಾನ್ಯರೆ,

ವಿಷಯ: 2016ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತೃತೀಯ ನವೀಕರಣಕ್ಕೆ "online" ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2016ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ "Direct Benefit Transfer (DBT) Programme" ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ತೃತೀಯ ನವೀಕರಣಕ್ಕೆ "online" ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website: **www.scholarships.gov.in** ನ National e-Scholarship Portal ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, 2016ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ತೃತೀಯ ನವೀಕರಣದ ನಿಮಿತ್ತ ಈ portalನಲ್ಲಿಯೇ ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ "online" ಮೂಲಕ ದಿನಾಂಕ 31–10–2019 ರೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕಿರುತ್ತದೆ.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ 2016ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ "online" ಮೂಲಕ ತೃತೀಯ ನವೀಕರಣಕ್ಕೆ ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:http://pue.kar.nic.in =>Scholarship=>MHRD Scholarship=> MHRD Scholarship 2016 III RENEWAL ವಿದ್ಯಾರ್ಥಿಗಳು ಈ ವೆಬ್‌ಸೈಟ್‌ನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: 31-10-2019 ರೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕಿರುತ್ತದೆ.

ಅರ್ಹ ವಿದ್ಯಾರ್ಥಿಗಳು ಸಲ್ಲಿಸಿರುವ ಅರ್ಜಿಗಳಲ್ಲಿರುವ ಮಾಹಿತಿಯನ್ನು ನಿಯಮಾನುಸಾರ ಪರಿಶೀಲಿಸಿ, ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕೆ ಅರ್ಹರಾಗಿದ್ದಲ್ಲಿ ದೃಢೀಕರಿಸಿ, ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸಬೇಕಾಗಿ ಕೋರಿದೆ. ವಿದ್ಯಾರ್ಥಿಗಳು ಈ ಮೊದಲು ತೃತೀಯ ನವೀಕರಣದ ನಿಮಿತ್ತ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅವುಗಳನ್ನು ಪರಿಗಣಿಸಲಾಗುವುದಿಲ್ಲ. ವಿದ್ಯಾರ್ಥಿಗಳಿಗೆ online ಮೂಲಕ ಅರ್ಜಿಯನ್ನು ಸಲ್ಲಿಸಲು ಸೂಚಿಸುವುದು.

**ELIGIBILITY CRITERIA:**

- Students must have completed the concerned Semesters / Annual examination in FIRST ATTEMPT securing 50% or more than equivalent Grades,

- Students must have put in 75% of attendance in the concerned semesters/year.
- Students character / conduct must be good.
- If a scholarship awardee becomes ineligible then scholarship will not continue. His / her name gets deleted.

Students should compulsorily link the Aadhaar no. with their Bank account.

ತಮ್ಮ ನಂಬುಗೆಯ,

ನಿರ್ದೇಶಕರು,

ಪದವಿ ಪೂರ್ವ ಶಿಕ್ಷಣ ಇಲಾಖೆ.